# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1164(1030)

ಸದಸ್ಯರ ಹೆಸರು : ಶ್ರೀ ಐವನ್ ಡಿಸೋಜ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 22.08.2025

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ.ಸ. | ಪ್ರಶ್ನೆ | ಉತ್ತರ |
|---|---|---|
| ಅ | ಸಮಾಜ ಕಲ್ಯಾಣ ಇಲಾಖೆಯಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಾಲೋನಿ ಅಭಿವೃದ್ಧಿಗಾಗಿ 2022-23, 2023-24, 2024-25 ರಲ್ಲಿ ಬಿಡುಗಡೆ ಮಾಡಿದ ಅನುದಾನ ಎಷ್ಟು; ಯಾವ ಯಾವ ಕ್ಷೇತ್ರಕ್ಕೆ ಶಿಫಾರಸ್ಸು ಮೇರೆಗೆ ನೀಡಲಾಗಿದೆ; (ಕ್ಷೇತ್ರವಾರು ವಿವರ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಅನುಷ್ಠಾನ ಮಾಡುತ್ತಿರುವ ಪ್ರಗತಿ ಕಾಲೋನಿ ಯೋಜನೆಯಡಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕಳೆದ ಮೂರು ವರ್ಷಗಳಲ್ಲಿ ಮಂಜೂರಾತಿ ನೀಡಿ ಬಿಡುಗಡೆ ಮಾಡಿರುವ ವಿಧಾನಸಭಾ ಕ್ಷೇತ್ರವಾರು ಅನುದಾನದ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಎಷ್ಟು ಸಮುದಾಯ ಭವನಗಳನ್ನು ನಿರ್ಮಿಸಲಾಗಿದೆ; (ವಿವರ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಅನುಷ್ಠಾನ ಮಾಡುತ್ತಿರುವ ಡಾ.ಬಿ.ಆರ್.ಅಂಬೇಡ್ಕರ್/ ಡಾ.ಬಾಬು ಜಗಜೀವನರಾಮ್ ಸಮುದಾಯ ಭವನಗಳ ನಿರ್ಮಾಣ ಕಾರ್ಯಕ್ರಮದಡಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 03 ವಿವಿಧ ಸಮುದಾಯ ಭವನಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದ್ದು, ಕಾಮಗಾರಿಗಳನ್ನು ಪ್ರಾರಂಭಿಸಬೇಕಾಗಿರುತ್ತದೆ. |
| ಇ | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳು ಕಳಪೆ ಮಟ್ಟದಿಂದ ಕೂಡಿರುವುದಕ್ಕಾಗಿ ದೂರುಗಳು ಬಂದಿರುವುದು ಇಲಾಖೆ ಗಮನಕ್ಕೆ ಬಂದಿದೆಯೇ; | ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕೈಗೊಳ್ಳಲಾಗಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳು ಕಳಪೆ ಮಟ್ಟದಿಂದ ಕೂಡಿರುವ ಬಗ್ಗೆ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |

| | | |
|---|---|---|
| ಈ | ಕಾಲೋನಿ ಅಭಿವೃದ್ಧಿಗಾಗಿ ನೀಡಿದ ಅನುದಾನ ಯಾವ ಮಾನದಂಡಗಳ ಆಧಾರದ ಮೇಲೆ ನೀಡಲಾಗಿದೆ? | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಅನುಷ್ಠಾನ ಮಾಡುತ್ತಿರುವ ಪ್ರಗತಿ ಕಾಲೋನಿ ಯೋಜನೆಯಡಿ ರಾಜ್ಯದಲ್ಲಿನ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರದ ಆದೇಶಸಂ: ಸಕಇ 375 ಎಸ್‌ಡಿಸಿ 2018, ದಿ:10-10-2018ರಲ್ಲಿ ಮಾರ್ಗಸೂಚಿಗಳನ್ನು ರಚಿಸಲಾಗಿರುತ್ತದೆ. ಅದರನ್ವಯ, ಮಾನ್ಯ ಸಚಿವರು/ ಸಂಸದರು/ ಶಾಸಕರು/ ಜನಪ್ರತಿನಿಧಿಗಳು/ ಜನ ಸಾಮಾನ್ಯರು /ಜಿಲ್ಲೆಗಳಿಂದ ಅನುದಾನ ಕೋರಿ ಸ್ವೀಕೃತವಾಗುವ ಮನವಿ/ಪ್ರಸ್ತಾವನೆಗಳ ನ್ನಾಧರಿಸಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ಸರ್ಕಾರದಿಂದ ಹೊರಡಿಸಲಾಗುವ ಮಂಜೂರಾತಿ ಆದೇಶಗಳಿಗೆ ಅನುಗುಣವಾಗಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರು ಅನುದಾನ ಬಿಡುಗಡೆ ಮಾಡಲು ಕ್ರಮವಹಿಸುತ್ತಾರೆ. |

ಸಂಖ್ಯೆ:ಸಕಇ 478 ಎಸ್‌ಎಲ್‌ಪಿ 2025

(ಡಾ. ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1164 (1030) ಕ್ಕೆ ಅನುಬಂಧ.

ಕಳೆದ 3 ವರ್ಷಗಳಲ್ಲಿ ಪ್ರಗತಿ ಕಾಲೋನಿ ಯೋಜನೆಯಡಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ವಿಧಾನಸಭಾ ಕ್ಷೇತ್ರಗಳಿಗೆ ಮಂಜೂರಾತಿ ನೀಡಿ ಬಿಡುಗಡೆ ಮಾಡಿರುವ ಅನುದಾನದ ವಿವರ.

ರೂ.ಲಕ್ಷಗಳಲ್ಲಿ

| ಕ್ರ. ಸಂ. | ವಿಧಾನಸಭಾ ಕ್ಷೇತ್ರ | 2023-24 | | 2024-25 | | 2025-26 | | ಒಟ್ಟು | |
|---|---|---|---|---|---|---|---|---|---|
| | | ಮಂಜೂರಾತಿ ಮೊತ್ತ | ಬಿಡುಗಡೆ ಮಾಡಿದ ಮೊತ್ತ | ಮಂಜೂರಾತಿ ಮೊತ್ತ | ಬಿಡುಗಡೆ ಮಾಡಿದ ಮೊತ್ತ | ಮಂಜೂರಾತಿ ಮೊತ್ತ | ಬಿಡುಗಡೆ ಮಾಡಿದ ಮೊತ್ತ | ಮಂಜೂರಾತಿ ಮೊತ್ತ | ಬಿಡುಗಡೆ ಮಾಡಿದ ಮೊತ್ತ |
| | **ದಕ್ಷಿಣ ಕನ್ನಡ** | | | | | | | | |
| 1 | ಬೆಳ್ತಂಗಡಿ | 0.00 | 0.00 | 0.00 | 0.00 | 500.00 | 265.50 | 500.00 | 265.50 |
| 2 | ಮೂಡಬಿದಿರೆ | 0.00 | 0.00 | 0.00 | 0.00 | 100.00 | 33.00 | 100.00 | 33.00 |
| 3 | ಮಂಗಳೂರು ನಗರ ಉತ್ತರ | 100.00 | 98.90 | 0.00 | 0.00 | 0.00 | 0.00 | 100.00 | 98.90 |
| 4 | ಮಂಗಳೂರು ನಗರ | 100.00 | 0.00 | 0.00 | 0.00 | 0.00 | 0.00 | 100.00 | 0.00 |
| 5 | ಮಂಗಳೂರು ನಗರ ದಕ್ಷಿಣ | 0.00 | 0.00 | 0.00 | 0.00 | 0.00 | 0.00 | 0.00 | 0.00 |
| 6 | ಬಂಟ್ವಾಳ | 0.00 | 0.00 | 0.00 | 0.00 | 50.00 | 0.00 | 50.00 | 0.00 |
| 7 | ಪುತ್ತೂರು | 0.00 | 0.00 | 50.00 | 16.50 | 200.00 | 66.00 | 250.00 | 82.50 |
| 8 | ಸುಳ್ಯ | 380.00 | 225.00 | 0.00 | 0.00 | 350.00 | 115.50 | 730.00 | 340.50 |
| | **ಒಟ್ಟು** | **580.00** | **323.90** | **50.00** | **16.50** | **1200.00** | **480.00** | **1830.00** | **820.40** |
| | **ಉಡುಪಿ ಜಿಲ್ಲೆ** | | | | | | | | |
| 1 | ಬೈಂದೂರು | 0.00 | 0.00 | 0.00 | 0.00 | 200.00 | 66.00 | 200.00 | 66.00 |
| 2 | ಕುಂದಾಪುರ | 600.00 | 424.39 | 0.00 | 0.00 | 50.00 | 0.00 | 650.00 | 424.39 |
| 3 | ಉಡುಪಿ | 635.00 | 362.35 | 0.00 | 0.00 | 300.00 | 99.00 | 935.00 | 461.35 |
| 4 | ಕಾಪು | 0.00 | 0.00 | 0.00 | 0.00 | 400.00 | 132.00 | 400.00 | 132.00 |
| 5 | ಕಾರ್ಕಳ | 0.00 | 0.00 | 0.00 | 0.00 | 300.00 | 99.00 | 300.00 | 99.00 |
| | **ಒಟ್ಟು** | **1235.00** | **786.74** | **0.00** | **0.00** | **1250.00** | **396.00** | **2485.00** | **1182.74** |

ಆಯುಕ್ತರ ಪರವಾಗಿ,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.